ಸಂಖ್ಯೆ: KPSCKA/RCT1/PRSN/1/2025-RCT-1 ದಿ: 03-03-2026

## ಪತ್ರಿಕಾ ಪ್ರಕಟಣೆ

ಆಯೋಗದ ಅಧಿಸೂಚನೆ ಸಂಖ್ಯೆ ಪಿಎಸ್‌ಸಿ 1 ಆರ್‌ಟಿಬಿ-1/2023 (ಆರ್.ಪಿ.ಸಿ) ಹಾಗೂ ಅಧಿಸೂಚನೆ ಸಂಖ್ಯೆ ಪಿಎಸ್‌ಸಿ 1 ಆರ್‌ಟಿಬಿ-2/2023 (ಹೈ.ಕ) ದಿನಾಂಕ 13-03-2024 ರನ್ವಯ ಅಧಿಸೂಚಿಸಲಾಗಿದ್ದ ಕೆಳಕಂಡ ವಿವಿಧ ಗ್ರೂಪ್ ಬಿ ವೃಂದದ ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಹಾಗೂ ಕಟ್ ಆಫ್ ಅಂಕಗಳನ್ನು ದಿನಾಂಕ: 03-03-2026ರಂದು ಆಯೋಗದ ವೆಬ್‌ಸೈಟ್ http://kpsc.kar.nic.inನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

| ಕ್ರ.ಸಂ | ಇಲಾಖೆ ಮತ್ತು ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ | |
|---|---|---|---|
| | | ಉ.ಮೂ.ವ್ಯ | ಹೈ.ಕ |
| 1 | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ-1) | 92 | 08 |
| 2 | ಜಲ ಸಂಪನ್ಮೂಲ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ-1) | 90 | - |
| 3 | ಭೂಮಾಪನ, ಕಂದಾಯ ವ್ಯವಸ್ಥೆ, ಮತ್ತು ಭೂದಾಖಲೆಗಳ ಇಲಾಖೆಯಲ್ಲಿ ಸಹಾಯಕ ನಿರ್ದೇಶಕರು | 24 | 03 |
| 4 | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಪತ್ರಾಂಕಿತ ವ್ಯವಸ್ಥಾಪಕರು/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು | 21 | 19 |
| 5 | ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಯಲ್ಲಿ ಸಹಾಯಕ ನಿರ್ದೇಶಕರು | 20 | 03 |
| 6 | ಜಲ ಸಂಪನ್ಮೂಲ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) (ವಿಭಾಗ-1) | 10 | - |
| 7 | ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯಲ್ಲಿ ಕಾರ್ಖಾನೆಗಳ ಸಹಾಯಕ ನಿರ್ದೇಶಕರು | 07 | 02 |
| 8 | ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯಲ್ಲಿ ಬಾಯ್ಲರುಗಳ ಸಹಾಯಕ ನಿರ್ದೇಶಕರು | 03 | - |
| 9 | ಅಂತರ್ಜಲ ನಿರ್ದೇಶನಾಲಯದಲ್ಲಿ ಭೂ ವಿಜ್ಞಾನಿ | 10 | 15 |
| | **ಒಟ್ಟು** | **277** | **50** |

ಸದರಿ ತಾತ್ಕಾಲಿಕ ಆಯ್ಕೆಪಟ್ಟಿ ಸಂಬಂಧ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ, ಈ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಿದ 07 ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-560001 ಇವರಿಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ ಹಾಗೂ ಕೊನೆಯ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಮುಂದುವರೆದು, ಸದರಿ ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಈ ಹುದ್ದೆಗಳಿಗೆ ಆಯ್ಕೆಯಾಗಲು ಇಚ್ಛಿಸದಿದ್ದಲ್ಲಿ, ಆಯೋಗದ ಅಂತರ್ಜಾಲದಲ್ಲಿ ಲಭ್ಯವಿರುವ Not-Willingness Certificate ಅನ್ನು ಡೌನ್ ಲೋಡ್ ಮಾಡಿಕೊಂಡು Stamp Paper ನಲ್ಲಿ ನೋಟರಿ ಮುಖಾಂತರ ದೃಢೀಕರಿಸಿರುವ ಪ್ರಮಾಣ ಪತ್ರ ಮತ್ತು ಪೂರಕ ದಾಖಲೆಗಳೊಂದಿಗೆ ಆಯೋಗಕ್ಕೆ ಖುದ್ದಾಗಿ ಹಾಜರಾಗಿ ಸ್ವ- ಇಚ್ಛಾ ಹೇಳಿಕೆಯನ್ನು ಸಲ್ಲಿಸಬಹುದಾಗಿರುತ್ತದೆ ಎಂದು ತಿಳಿಸಿದೆ.

Digitally signed by
KRISHNAMURTHY JYOTHI
Date: 04-03-2026
16:39:38

(ಜ್ಯೋತಿ.ಕೆ)

ಕಾರ್ಯದರ್ಶಿ,

ಕರ್ನಾಟಕ ಲೋಕ ಸೇವಾ ಆಯೋಗ